**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 8/2022**

**ಚಾ.ಸಾ. :-1**
**ಪ್ರಾ.ಸಾ. :-1**

| | |
|---|---|
| ಹೆಸರು | : ಸ್ವಾಮಿ |
| ತಂದೆಯ ಹೆಸರು | : ಲೇಟ್ ನರಸಿಂಹೇಗೌಡ |
| ವಯಸ್ಸು | : 38 ವರ್ಷ |
| ಉದ್ಯೋಗ | : ಶಾಮಿಯಾನ ಅಂಗಡಿ ಕೆಲಸ |
| ವಾಸಸ್ಥಳ | : ಅಚ್ಚಪ್ಪನಕೊಪ್ಪಲು ಗ್ರಾಮ |

**ಪ್ರಮಾಣೀಕರಿಸಲಾದ ದಿನಾಂಕಃ- 02.03.2026**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ನರಸಿಂಹೇಗೌಡ ರವರು ನನ್ನ ತಂದೆ. ದಿನಾಂಕಃ 11.04.2021 ರಂದು ರಾತ್ರಿ 7.30 ರ ಸಮಯದಲ್ಲಿ ಆರತಿ ಉಕ್ಕಡ ಕಡೆಯಿಂದ ವಿದ್ಯಾನಗರದ ನಮ್ಮ ಮನೆಗೆ ನಡೆದುಕೊಂಡು ಬರುವಾಗ ಅವರಿಗೆ ದ್ವಿಚಕ್ರ ವಾಹನ ಡಿಕ್ಕಿಪಡಿಸಿ ಅಪಘಾತವಾಗಿರುತ್ತದೆ. ಆ ಸಮಯದಲ್ಲಿ ನಾನು ಕೆಲಸಕ್ಕೆ ಹೋಗಿದ್ದು, ನನಗೆ ಅಪಘಾತದ ಬಗ್ಗೆ ದೂರವಾಣಿ ಕರೆ ಮಾಡಿ ತಿಳಿಸಿರುತ್ತಾರೆ. ನಂತರ ನಾನು ಆಸ್ಪತ್ರೆಗೆ ಹೋಗಿ ಅವರನ್ನು ನೋಡಿರುತ್ತೇನೆ, ಅವರು ಅಷ್ಟರಲ್ಲಾಗಲೇ ಮೃತಪಟ್ಟಿದ್ದರು.

ಆ ಬಗ್ಗೆ ನಾನು ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ಅಪಘಾತ ಹೇಗೆ ಆಗಿರುತ್ತದೆ ಎಂದು ನನಗೆ ಖುದ್ದಾಗಿ ಮಾಹಿತಿ ಇಲ್ಲ ಎಂದರೆ ಸರಿ. ಅಪಘಾತ ಪಡಿಸಿದ ವಾಹನದ ಸವಾರ ಯಾರು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಸದರಿ ರಸ್ತೆಯಲ್ಲಿ ಸಾಕಷ್ಟು ವಾಹನಗಳು ಓಡಾಡುತ್ತವೆ ಎಂದರೆ ಸರಿ. ಅಪಘಾತದ ಬಗ್ಗೆ ನನಗೆ ಮಾಹಿತಿ ಕೊಟ್ಟ ವ್ಯಕ್ತಿ ಯಾರು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಅಪಘಾತ ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ ಎಂದರೆ ಸರಿ. ಆರೋಪಿ ಅಪಘಾತ ಮಾಡದಿದ್ದರೂ ವಿಮೆ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ದೂರು ನೀಡಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**